ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

**"ಕನ್ನಡ ಕಾಯಕ ವರ್ಷ ೨೦೨೦-೨೧"**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿರಸ್ತೆ,
ಬೆಂಗಳೂರು–560001.

ಸಂಖ್ಯೆ: ಕಾಶಿಇ/ಶೈವಿ/153/ಸ್ವಾವಿಜ/2020–21 ದಿನಾಂಕ:08.01.2021.

**ಸುತ್ತೋಲೆ**

ವಿಷಯ: ಸ್ವಾಮಿ ವಿವೇಕಾನಂದರ 158ನೇ ಜನ್ಮ ದಿನಾಚರಣೆಯ ಅಂಗವಾಗಿ ದಿನಾಂಕ:12.01.2021 ರಂದು ರಾಷ್ಟ್ರೀಯ ಯುವ ದಿನಾಚರಣೆಯನ್ನು ಆಚರಿಸುವ ಬಗ್ಗೆ.

* * * * * *

ರಾಷ್ಟ್ರ ಕಂಡ ಮಹಾನ್ ದಾರ್ಶನಿಕ, ತತ್ವಶಾಸ್ತ್ರಜ್ಞ, ಚಿಂತಕ, ವೀರ ಸನ್ಯಾಸಿ, ಸ್ವಾಮಿ ವಿವೇಕಾನಂದರ ಜನ್ಮ ದಿನವಾದ ಜನವರಿ 12 ನ್ನು ಭಾರತೀಯ ಯುವ ಜನಾಂಗಕ್ಕೆ ಸ್ವಾಮಿ ವಿವೇಕಾನಂದರ ಆದರ್ಶ ಹಾಗೂ ವಿಚಾರ ಧಾರೆಗಳು ಸ್ಫೂರ್ತಿದಾಯಕವಾಗಲಿ ಎಂಬ ಸದಾಶಯದಿಂದ 1984 ರಿಂದ ದೇಶದಾದ್ಯಂತ **"ರಾಷ್ಟ್ರೀಯ ಯುವ ದಿನಾಚರಣೆ"** ಯನ್ನಾಗಿ ಆಚರಿಸಲಾಗುತ್ತಿದೆ. ಸಾಮಾಜಿಕ ಹಾಗೂ ಆಧ್ಯಾತ್ಮಿಕ ಸಾಧಕರೂ ಆಗಿರುವ ಸ್ವಾಮಿ ವಿವೇಕಾನಂದರು ಯುವ ಜನಾಂಗಕ್ಕೆ ನೀಡಿರುವ ಸಂದೇಶಗಳು ಅಂದಿಗೂ ಇಂದಿಗೂ ಎಂದೆಂದಿಗೂ ಸ್ವೀಕಾರಾರ್ಹವಾಗಿರುತ್ತವೆ.

ರಾಷ್ಟ್ರಿಯತೆ, ದೇಶಭಕ್ತಿ ಹಾಗೂ ಭಾರತೀಯರ ಜೀವನದಲ್ಲಿ ಅದರಲ್ಲೂ ವಿಶೇಷವಾಗಿ ಸ್ವಾಮಿ ವಿವೇಕಾನಂದರ ಗುರಿಯಾಗಿದ್ದ ಯುವ ಜನಾಂಗದಲ್ಲಿ ದೇಶ ಕಟ್ಟುವ, ದೇಶದ ಭವಿಷ್ಯವನ್ನು ಉಜ್ವಲವಾಗಿ ರೂಪಿಸುವ, ಒಡೆದ ಮನಸ್ಸುಗಳಿಗೆ ಭಾವೈಕ್ಯದ ಬೆಸುಗೆ ಹಾಕುವ ಅದ್ಭುತ ಸಾಮರ್ಥ್ಯ ಇರುವ ಯುವಶಕ್ತಿಗೆ ಈ ದೇಶದ ಭವ್ಯ ಇತಿಹಾಸ, ಪರಂಪರೆ, ಸಂಸ್ಕೃತಿಗಳ ವಿಚಾರದಲ್ಲಿ ಹೆಮ್ಮೆಪಡುತ್ತಲೇ ವಿದ್ಯಾರ್ಥಿಗಳು ತಮ್ಮ ವರ್ತಮಾನದ ಕರ್ತವ್ಯದ ಬಗ್ಗೆ ಆಲೋಚನೆ ಮಾಡುವಂತೆ ಹಾಗೂ ಕಾರ್ಯ ಪ್ರವೃತ್ತರಾಗುವಂತೆ ಸ್ವಾಮಿ ವಿವೇಕಾನಂದರು ಬೋಧಿಸಿರುವ ಮೌಲ್ಯಗಳನ್ನು ರಾಜ್ಯಾದಾದ್ಯಂತ ಕಾಲೇಜು ವಿದ್ಯಾರ್ಥಿಗಳು ಮತ್ತು ಯುವ ಜನತೆಗೆ ಸ್ಫೂರ್ತಿಯ ಸಂದೇಶವನ್ನು ನೀಡುವ ನಿಟ್ಟಿನಲ್ಲಿ **"ರಾಷ್ಟ್ರೀಯ ಯುವ ದಿನಾಚರಣೆ"**ಯ ಅಂಗವಾಗಿ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ **"ದಿನಾಂಕ:12.01.2021 ರಂದು ಸ್ವಾಮಿ ವಿವೇಕಾನಂದರ ಜನ್ಮದಿನಾಚರಣೆ"** ಯನ್ನು ಅರ್ಥಪೂರ್ಣವಾಗಿ ಆಚರಿಸಲು ಸೂಚಿಸಲಾಗಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

**ಇವರಿಗೆ:**

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ. – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

<u>ಪ್ರತಿಯನ್ನು:</u>

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳ ಶಾಖೆಗೆ, ಕೊಠಡಿ ಸಂಖ್ಯೆ: 317/317ಎ 3ನೇ ಮಹಡಿ, ವಿಧಾನಸೌಧ, ಬೆಂಗಳೂರು – 560 001.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆಗೆ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು – 560 001.
3. ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರ ಆಪ್ತಶಾಖೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – 560 001.
4. ಕಛೇರಿ ಪ್ರತಿ.